# ದಿನಾಂಕ: 05/03/2022 ರ ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಂಖ್ಯೆ-141 ಆಜಾದ್‌ನಗರ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು:

| ಕ್ರ. ಸಂ. | ಅಧಿಕಾರಿ/ ನೌಕರರ ಹೆಸರು | ಪದನಾಮ |
|---|---|---|
| 1 | ಶ್ರೀ. ಹೆಚ್.ಎನ್. ಜಯಸಿಂಹ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೃಹತ್ ನೀರುಗಾಲುವೆ) ಹಾಗೂ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ: 141 |
| 2 | ಶ್ರೀ. ಟಿ. ಶ್ರೀನಿವಾಸರಾಜು | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-141 |
| 3 | | ಆರಕ್ಷಕ ನಿರೀಕ್ಷಕರು, ಚಾಮರಾಜಪೇಟೆ/ಬ್ಯಾಟರಾಯನಪುರ ಉಪವಿಭಾಗ |
| 4 | ಶ್ರೀ. ಪ್ರಶಾಂತ್ | ಬೆಸ್ಕಾಂ ಅಭಿಯಂತರರು |
| 5 | ಶ್ರೀ. ಶಿವಕುಮಾರ್ | ಬಿ.ಡಬ್ಲ್ಯೂ.ಎಸ್.ಎಸ್.ಬಿ ನೌಕರರು |
| 6 | | ಕಂದಾಯ ಪರಿವೀಕ್ಷಕರು |
| 7 | ಶ್ರೀ. ಶ್ರೀನಿವಾಸ್/ ಶ್ರೀ. ರಾಮಕೃಷ್ಣ/ಶ್ರೀ. ಯಶವಂತ್ | ಹಿರಿಯ/ ಕಿರಿಯ ಆರೋಗ್ಯ ಪರಿವೀಕ್ಷಕರು |
| 8 | ಶ್ರೀ. ಮಂಜುನಾಥ್ | ಹೆಡ್ ಗ್ಯಾಂಗ್‌ಮೆನ್ ಮತ್ತು ಮಾರ್ಷಲ್‌ಗಳು |
| | ಹಾಗೂ ಇತರೆ ಸಾರ್ವಜನಿಕರುಗಳು | |

1. ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ: 141 ರ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಪರಿಚಯದೊಂದಿಗೆ ವಿವರಿಸುತ್ತಾ ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

2. ವಾರ್ಡ್ ಸಮಿತಿ ಸಭೆಯಲ್ಲಿ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ವಾರ್ಡ್ ವ್ಯಾಪ್ತಿಯ ಜಲಮಂಡಳಿ, ಬೆಸ್ಕಾಂ, ಘನತ್ಯಾಜ್ಯ ವಿಲೇವಾರಿ, ಆರೋಗ್ಯ ಇಲಾಖೆ, ಕಂದಾಯ, ಕಾಮಗಾರಿ ಇಲಾಖೆಗಳಿಗೆ ಸಂಬಂಧಿಸಿದಂತೆ ಪ್ರಸ್ತುತ ಇರುವ ಸಮಸ್ಯೆಗಳು ಹಾಗೂ ಪರಿಹಾರೋಪಾಯಗಳು ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

3. ವಾರ್ಡ್‌ನ ವ್ಯಾಪ್ತಿಯಲ್ಲಿ ರಸ್ತೆಬದಿಯ ಮರಗಳಿಂದ ಒಣ ಎಲೆಗಳು ಉದುರುತ್ತಿದ್ದು, ಗಾಳಿಯಲ್ಲಿ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಹರಡಿಕೊಂಡಿದ್ದು, ಇದನ್ನು ತೆಗೆಯಲು ಸಭೆಯಲ್ಲಿ ಪ್ರಸ್ತಾಪಿಸಿರುತ್ತಾರೆ.

   (ಕಿರಿಯ ಆರೋಗ್ಯ ಪರಿವೀಕ್ಷಕರು/ಮಾರ್ಷಲ್ (ಚಾಮರಾಜಪೇಟೆ) ವಿಭಾಗ ರವರು ಕ್ರಮವಹಿಸುವುದು)

4. ವಾರ್ಡ್‌ನ ವ್ಯಾಪ್ತಿಯಲ್ಲಿ ಆಜಾದ್‌ನಗರ, ರಾಮಚಂದ್ರ ಅಗ್ರಹಾರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ BWSSB ವತಿಯಿಂದ ಸರಿಯಾಗಿ ಕುಡಿಯುವ ನೀರು ಸರಬರಾಜು ಆಗುತ್ತಿರುವುದಿಲ್ಲ ಎಂದು ಸಭೆಯಲ್ಲಿ ಸಾರ್ವಜನಿಕರು ತಿಳಿಸಿರುತ್ತಾರೆ. ಈ ಬಗ್ಗೆ BWSSB ವಿಭಾಗದ ಅಧಿಕಾರಿಗಳು ಮಾತನಾಡಿ, ಬೇಸಿಗೆ ಕಾಲ ಇರುವುದರಿಂದ ನೀರು ಸರಬರಾಜು ಮಾಡಲು ಸಮಸ್ಯೆ ಇದ್ದು, ಶೀಘ್ರದಲ್ಲಿ ಪರಿಹರಿಸಲು ಕ್ರಮವಹಿಸುವುದಾಗಿ ತಿಳಿಸಿರುತ್ತಾರೆ.

   (ಸಹಾಯಕ /ಕಿರಿಯ ಅಭಿಯಂತರರು (BWSSB) ವಿಭಾಗ ರವರು ಕ್ರಮವಹಿಸುವುದು)

ಪು.ತಿ.ನೋ (2) ಕ್ಕೆ

5. ವಾರ್ಡ್‌ನ ವ್ಯಾಪ್ತಿಯಲ್ಲಿ ಸಮಯಕ್ಕೆ ಸರಿಯಾಗಿ ಆಟೋಟಿಪ್ಪರ್‌ಗಳು ಮನೆ-ಮನೆಗಳಿಂದ ಕಸ ಸಂಗ್ರಹಿಸಲು ಬರುತ್ತಿರುವುದಿಲ್ಲ. ಹಾಗೂ ರಸ್ತೆಗಳನ್ನು ಶುಚಿಗೊಳಿಸಲು ಪೌರಕಾರ್ಮಿಕರು ಬರುತ್ತಿಲ್ಲವೆಂದು ಸಭೆಯಲ್ಲಿ ಪ್ರಸ್ತಾಪಿಸಿರುತ್ತಾರೆ.

(ಕಿರಿಯ ಆರೋಗ್ಯ ಪರಿವೀಕ್ಷಕರು/ಮಾರ್ಷಲ್ (ಚಾಮರಾಜಪೇಟೆ) ವಿಭಾಗ ರವರು ಕ್ರಮವಹಿಸುವುದು)

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

Srinivasa J T
5/3/22

ಕಾರ್ಯದರ್ಶಿ ಮತ್ತು
ಸಹಾಯಕ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

ಪ್ರತಿಯನ್ನು ತಮ್ಮ ಮಾಹಿತಿಗಾಗಿ ಸಲ್ಲಿಸಿದೆ:-

1. ಮಾನ್ಯ ಆಡಳಿತಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಅವಗಾಹನೆಗೆ ಸಲ್ಲಿಸಲಾಗಿದೆ.
5. ಮಾನ್ಯ ವಲಯ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಲಾಗಿದೆ.
6. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಲಾಗಿದೆ.
7. ಮುಖ್ಯ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಲಾಗಿದೆ.
8. ಕಾರ್ಯಪಾಲಕ ಅಭಿಯಂತರರು (ಚಾಮರಾಜಪೇಟೆ) ವಿಭಾಗ ರವರ ಅವಗಾಹನೆಗೆ ಸಲ್ಲಿಸಲಾಗಿದೆ.
9. ಕಾರ್ಯಪಾಲಕ ಅಭಿಯಂತರರು (ವಿದ್ಯುತ್-ಪಶ್ಚಿಮ) ವಿಭಾಗ ರವರ ಅವಗಾಹನೆಗೆ ಸಲ್ಲಿಸಲಾಗಿದೆ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಚಾಮರಾಜಪೇಟೆ) ಉಪವಿಭಾಗ ರವರ ಅವಗಾಹನೆಗೆ ಸಲ್ಲಿಸಲಾಗಿದೆ.
11. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ (ಚಾಮರಾಜಪೇಟೆ) ವಿಭಾಗ ರವರ ಅವಗಾಹನೆಗೆ ಸಲ್ಲಿಸಲಾಗಿದೆ.
12. ಸಹಾಯಕ ಕಂದಾಯ ಅಧಿಕಾರಿ (ಚಾಮರಾಜಪೇಟೆ) ಉಪವಿಭಾಗ ರವರ ಅವಗಾಹನೆಗೆ ಸಲ್ಲಿಸಲಾಗಿದೆ.
13. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (BWSSB) ಉಪವಿಭಾಗ ರವರ ಅವಗಾಹನೆಗೆ ಸಲ್ಲಿಸಲಾಗಿದೆ.
14. ಕಛೇರಿ ಕಡತಕ್ಕೆ.